ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 75/2022

(ಫ್ರಾಸಾ-1 ಚಾಸಾ-3 )
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 09.10.2024

| | | |
|---|---|---|
| ಸಾಕ್ಷಿದಾರರ ಹೆಸರು | - | ನಂಜುಂಡೇಗೌಡ. ಜೆ.ಸಿ. |
| ತಂದೆಯ ಹೆಸರು | - | ಲೇಟ್ ಜೆ ಚೆನ್ನಪ್ಪ |
| ವಯಸ್ಸು | - | 52 ವರ್ಷ, |
| ಉದ್ಯೋಗ | - | ಅಂಗಡಿ ವ್ಯಾಪಾರ |
| ವಾಸ | - | ಜಡಿಗೇನಹಳ್ಳಿ |

ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

ನನಗೆ ಜಡಿಗೇನಹಳ್ಳಿ ದಿನಸಿ ಅಂಗಡಿ ಇದೆ. ಚಾಸಾ-1 ಮತ್ತು 2 ಗೊತ್ತು. ಅವರು ಪರಿಶಿಷ್ಟ ಜಾತಿಗೆ ಸೇರಿದವರು. ಆರೋಪಿತರ ಪರಿಚಯ ಇದೆ. ಅವರು ವನ್ನಿಕುಲದವರು. ಈಗ ಸುಮಾರು 2-3 ವರ್ಷಗಳ ಹಿಂದೆ ನಾನು ನನ್ನ ಅಂಗಡಿಯಲ್ಲಿ ಇದ್ದಾಗ ಚಾಸಾ-1 ಮತ್ತು ಆರೋಪಿತರು ಸಹ ಅಂಗಡಿ ಬಳಿ ಇದ್ದರು. ಚಾಸಾ-1 ಬಂದು ಆರೋಪಿತರನ್ನು ಬೈದು ಅವರೊಂದಿಗೆ ಗಲಾಟೆ ಮಾಡಿರುತ್ತಾರೆ. ಆಗ ಅವರಿಬ್ಬರ ನಡುವೆ ಮಾತಿನ ಚಕಮಕಿ ನಡೆಯಿತು. ಗಲಾಟೆ ಯಾವ ವಿಚಾರವಾಗಿ ಆಯಿತು ಎಂದು ನನಗೆ ಗೊತ್ತಿಲ್ಲ. ನನ್ನ ಅಂಗಡಿ ಮುಂದೆ ಗಲಾಟೆ ಮಾಡಬೇಡಿ ಎಂದು ನಾನು ಹೇಳಿ ಅವರನ್ನು ಕಳುಹಿಸಿದೆ. ಆನಂತರ ಏನಾಯಿತು ಎಂದು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಹೇಳಿಕೆಯನ್ನು ಪಡೆದುಕೊಂಡಿದ್ದು ಈ ಮೇಲೆ ಹೇಳಿದ ವಿಚಾರವನ್ನು ನಾನು ಪೋಲಿಸರಿಗೆ ಹೇಳಿರುತ್ತೇನೆ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಎಸ್‌ಪಿಪಿ ರವರು ವಿನಂತಿಸಿದ್ದರಿಂದ ಸಾಕ್ಷಿಯ ಹೇಳಿಕೆ ಹಾಗೂ ಇತರೆ ನ್ಯಾಯಾಲಯದ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ</u>

2. ದಿಃ17.09.2021 ರಂದು ಗಲಾಟೆಯಾಗಿತ್ತು ಎಂದರೆ ಇರಬಹುದು. ಆ ದಿನದಂದು ನಮ್ಮ ಅಂಗಡಿ ಬಳಿ 1 ನೇ ಆರೋಪಿ ಚಾಸಾ-2 ರವರ ಕಾಲು ತುಳಿದಿದ್ದಕ್ಕೆ ಚಾಸಾ-1 ರವರು ಆ ಬಗ್ಗೆ ಕೇಳಿದ್ದು, 1 ಮತ್ತು 2 ನೇ ಆರೋಪಿತರು, ಚಾಸಾ-1 ಮತ್ತು 2 ರವರೊಂದಿಗೆ ಗಲಾಟೆ ಮಾಡಿ ಜಾತಿ ನಿಂದನೆ ಮಾಡಿ ಅವಾಚ್ಯ ಶಬ್ದಗಳಿಂದ ಬೈದು ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. 1 ನೇ ಆರೋಪಿ ದಪ್ಪದ ಕಲ್ಲಿನಿಂದ ಚಾಸಾ-1 ರವರಿಗೆ ಎಡಭಾಗದ ಸೊಂಟಕ್ಕೆ ಹೊಡೆದಿದ್ದರು ಎಂದರೆ ಸರಿಯಲ್ಲ. ಆಗ ಚಾಸಾ-4 ರಿಂದ 7 ರವರು ಗಲಾಟೆ ಬಿಡಿಸಿರುತ್ತಾರೆ ಎಂದರೆ ಸರಿಯಲ್ಲ. ಗಾಯಗೊಂಡ ಚಾಸಾ-1 ರವರನ್ನು ಚಂದ್ರಪ್ಪರವರು ಕಾರಿನಲ್ಲಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ ಎಂದರೆ ಸರಿಯಲ್ಲ. "ಅದೇ ವೇಳೆ ನಮ್ಮ ಗ್ರಾಮದ ----------- ಅವರುಗಳನ್ನು ನೋಡಿದರೆ ಗುರುತಿಸುತ್ತೇನೆ" ಎಂದು ನಾನು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಶಾನೆ ಪಿ-1 ಎಂದು ಗುರುತಿಸಲಾಯಿತು. ನಾನು ಸದರಿ ದಿನ ಗಲಾಟೆ ನೋಡಿದ್ದರೂ ಮತ್ತು ನಿಪಿ-1 ರಂತೆ ಹೇಳಿಕೆ ನೀಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ</u>**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸುತ್ತಾರೆ.

**<u>ಮರುವಿಚಾರಣೆಃ ಇಲ್ಲ</u>**

(ಸಾಕ್ಷಿ ಹೇಳಿದಂತೆ ಹೇಳಿಕೆಯನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಢೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ಕೆ. ಗುರುಪ್ರಸಾದ್)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು